# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

**ಪತ್ರಿಕಾ ಪ್ರಕಟಣೆ** ದಿನಾಂಕ: 03.10.2019

## ನೂತನ ಪೂಜ್ಯ ಮಹಾಪೌರರು ರವರಿಂದ ಅಧಿಕಾರಿಗಳ ಜೊತೆ ಪ್ರಥಮ ಸಭೆ:



ಬಿಬಿಎಂಪಿ ಕಾರ್ಯವೈಖರಿ ಬಗ್ಗೆ ತಿಳಿಯಲು ಗುರುವಾರ ನೂತನ ಪೂಜ್ಯ ಮಹಾಪೌರರು ಮೊದಲ ಸಭೆ ನಡೆಸಿದರು. ಸದರಿ ಸಭೆಯಲ್ಲಿ ಮಾನ್ಯ ಉಪಮಹಾಪೌರರು, ಮಾನ್ಯ ಕಾಂಗ್ರೆಸ್ ಪಕ್ಷದ ನಾಯಕರು, ಮಾನ್ಯ ಪಾಲಿಕೆ ಆಯುಕ್ತರು, ವಿಶೇಷ ಆಯುಕ್ತರು, ಘನತ್ಯಾಜ್ಯ ವಿಭಾಗದ ಜಂಟಿ ಆಯುಕ್ತರು, ಎಲ್ಲಾ ವಲಯಗಳ ಜಂಟಿ ಆಯುಕ್ತರು ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಬಿಬಿಎಂಪಿ ಎಲ್ಲಾ ವಲಯಗಳ ಜಂಟಿ ಆಯುಕ್ತರು ವಾರಕ್ಕೊಮ್ಮೆ ಕಾರ್ಯಪಾಲಕ ಅಭಿಯಂತರರು, ಸಹಾಯಕ ಕಾರ್ಯಪಾಲಕ ಅಭಿಯಂತರರು, ಸಹಾಯಕ ಅಭಿಯಂತರರ ಜೊತೆ ಕಡ್ಡಾಯವಾಗಿ ಸಭೆ ನಡೆಸಿ ಸಭಾ ನಡವಳಿಯಂತೆ ಕಾರ್ಯನಿರ್ವಹಿಸಬೇಕು. ಇಲ್ಲವಾದರೆ ಶೋಕಾಸ್ ನೋಟೀಸ್ ಜಾರಿಗೊಳಿಸಲಾಗುವುದು ಎಂದು ಮಹಾಪೌರರು ಸೂಚನೆ ನೀಡಿದರು.

ಸಭೆಯನ್ನು ಉದ್ದೇಶಿಸಿ ಮಾತನಾಡಿದ ಮಹಾಪೌರರು, ಜಂಟಿ ಆಯುಕ್ತರು ವಾರಕ್ಕೊಮ್ಮೆ ಸಭೆ ನಡೆಸಿದ ಬಳಿಕ 15 ದಿನಕ್ಕೊಮ್ಮೆ ವಲಯಗಳ ಉಸ್ತುವಾರಿ ವಹಿಸಿಕೊಂಡಿರುವ ವಿಶೇಷ ಆಯುಕ್ತರ ಜೊತೆ ಸಭೆ ನಡೆಸಿ ವರದಿ ಸಲ್ಲಿಸಬೇಕು. ತಿಂಗಳಿಗೊಮ್ಮೆ ನನಗೆ ಪ್ರಗತಿ ವರದಿ ಸಿದ್ದಪಡಿಸಿ ನೀಡಬೇಕು. ನಡವಳಿಕೆಯಂತೆ ಕರ್ತವ್ಯ ನಿರ್ವಹಿಸದಿದ್ದರೆ ಶೊಕಾಸ್ ನೋಟಿಸ್ ನೀಡಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು.

ನಗದಲ್ಲಿ ಕಸದ ಸಮಸ್ಯೆ ಹೆಚ್ಚಿದ್ದು, ಆ ಬಗ್ಗೆ ಹೆಚ್ಚು ಗಮನವರಿಸಬೇಕಿದೆ. ಮೂಲದಲ್ಲಿ ಏನೆಲ್ಲಾ ಸಮಸ್ಯೆ ಇದೆ ಎಂಬುದನ್ನು ಕೂಲಂಕುಶವಾಗಿ ತಿಳಿದುಕೊಂಡು ಅದನ್ನು ಇತ್ಯರ್ಥ ಮಾಡಿದಾಗ ಮಾತ್ರ ಸಮಸ್ಯೆ ನಿವಾರಣೆ ಮಾಡಲು ಸಾಧ್ಯ. ಜನಪ್ರತಿನಿಧಿಗಳು, ಅಧಿಕಾರಿಗಳು ಕೈಜೋಡಿಸಿ ಕೆಲಸ ಮಾಡಿದಾಗ ಇರುವ ಸಮಸ್ಯೆಯನ್ನು ತ್ವರಿತವಾಗಿ ನಿವಾರಣೆ ಮಾಡಬಹುದು ಎಂದರು.

ಜನರ ಸಮಸ್ಯೆ ಆಲಿಸಿ ಜನರಿಗೆ ಶೀಘ್ರ ಪರಿಹಾರ ಕಲ್ಪಿಸಬೇಕು. ಈ ಸಂಬಂಧ ಎಲ್ಲವನ್ನೂ ಸರಳೀಕರಣ ಮಾಡಲು ಮುಂದಾಗಬೇಕಿದೆ. ಏಕಗವಾಕ್ಷಿ ಪದ್ದತಿ ಜಾರಿಮಾಡಿದಾಗ ಸಾರ್ವಜನಿಕರಿಗೆ ಹೆಚ್ಚು ಅನುಕೂಲವಾಗಲಿದೆ. ಈ ಬಗ್ಗೆ ಕೂಡಲೆ ಕ್ರಮ ಕೈಗೊಳ್ಳಬೇಕಿದೆ ಎಂದು ತಿಳಿಸಿದರು.

ತೆರಿಗೆ ಹೆಚ್ಚಳಕ್ಕೆ ಹೆಚ್ಚು ಆದ್ಯತೆ ನೀಡಬೇಕು. ಪಾಲಿಕೆ ವ್ಯಾಪ್ತಿಗೆ ಒಳಪಡುವ ಆಸ್ತಿಗಳನ್ನು ಗುತ್ತಿಗೆ ಕೊಟ್ಟಿರುವ ಮಾಹಿತಿ, ಜಾಹೀರಾತು ನಿಯಮ ಜಾರಿ ಮಾಡುವ ಪ್ರಕ್ರಿಯೆ ಸೇರಿದಂತೆ ಎಲ್ಲಾ ಪ್ರಮುಖ ಸಮಸ್ಯೆಗಳ ಪಟ್ಟಿ ಮಾಡಿ 15 ದಿನದೊಳಗಾಗಿ ವರದಿ ಕೊಡಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಎಲ್ಲ ಎಂಟು ವಲಯಗಳಲ್ಲೂ ಪ್ರತಿನಿತ್ಯ ರಾತ್ರಿ ಪ್ರಹರಿ ವಾಹನಗಳು ಗಸ್ತು ತಿರುಗಬೇಕು. ಆಯಾ ವಲಯ ಅಧಿಕಾರಿಗಳು ಇದರ ಉಸ್ತುವಾರಿ ನೋಡಿಕೊಳ್ಳಬೇಕು. ಮುಖ್ಯವಾಗಿ ಇನ್ನು ಮೂರು ದಿನ ಬೆಂಗಳೂರಿನಲ್ಲಿ ಭಾರೀ ಮಳೆಯಾಗುವುದಾಗಿ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಈ ಹಿನ್ನೆಲೆಯಲ್ಲಿ ಅಧಿಕಾರಿಗಳು ದಿನದ 24 ಗಂಟೆ ಕಟ್ಟೆಚ್ಚರದಿಂದ ಇರಬೇಕು. ದೂರುಗಳು ಬಂದಾಗ ತಕ್ಷಣ ಧಾವಿಸಿ ಜನರಿಗೆ ನೆರವು, ಪರಿಹಾರ ಒದಗಿಸಬೇಕು, ನಿಯಂತ್ರಣ ಕೊಠಡಿ 24*7 ಕೆಲಸ ನಿರ್ವಹಿಸಬೇಕು. ಯಾರಿಗೂ ತಪ್ಪು ಮಾಹಿತಿಯನ್ನು ನೀಡಬಾರದು ಎಂದು ಸೂಚಿಸಿದರು.

ಬಿಬಿಎಂಪಿ ಕೇಂದ್ರ ಕಚೇರಿಯನ್ನು ಇಂದಿನಿಂದಲೇ ಪ್ಲಾಸ್ಟಿಕ್ ಮುಕ್ತ ಮಾಡಬೇಕು. ಯಾವುದೇ ಸಭೆ, ಸಮಾರಂಭ ಇರಲಿ ಪ್ಲಾಸ್ಟಿಕ್ ವಸ್ತುಗಳನ್ನು ತರಬಾರದು. ಎಲ್ಲಾ ಕಛೇರಿಗಳ ಮುಂಭಾಗ ಪ್ಲಾಸ್ಟಿಕ್ ಬಳಕೆ ನಿಷೇಧಿಸಲಾಗಿದೆ ಎಂದು ನಾಮಫಲಕಗಳನ್ನು ಅಳವಡಿಸಲು ಅಧಿಕಾರಿಗಳಿಗೆ ಸೂಚನೆ ನೀಡಿ, ನನ್ನ ಅವಧಿಯಲ್ಲಿ ಪಾರದರ್ಶಕ ಆಡಳಿತ ನೀಡಬೇಕು. ಅಧಿಕಾರಿಗಳು ಜನಸ್ನೇಹಿಯಾಗಿ ಕೆಲಸ ನಿರ್ವಹಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ಮುಂದೆ ಬಿಬಿಎಂಪಿಯಲ್ಲಿ ಯಾವುದೇ ಯೋಜನೆ ಅಥವಾ ನಿಯಮಗಳನ್ನು ಜಾರಿತರಬೇಕಾದರೆ ಆ ಬಗ್ಗೆ ನಮ್ಮ ಬಳಿಯೂ ಚರ್ಚೆ ನಡೆಸಿ ಜಾರಿಗೊಳಿಸಬೇಕು. ನಿಯಮಗಳನ್ನು ಉಲ್ಲಂಘಿಸಿ ಯೋಜನೆಗಳನ್ನು ರೂಪಿಸುವಂತಿಲ್ಲ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದರು.

**<u>ಕಛೇರಿಗಳ ಪರಿಶೀಲನೆ:</u>**

ಸಭೆ ಮುಗಿದ ಬಳಿಕ ಕೇಂದ್ರ ಕಛೇರಿ ಆವರಣದಲ್ಲಿರುವ ಕೆಲ ಕೊಠಡಿಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ ಮಹಾಪೌರರು, ಎಲ್ಲಾ ಕೊಠಡಿಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಜೊತೆಗೆ ಶೌಚಾಲಯಕ್ಕೆ ಭೇಟಿ ನೀಡಿ ನಿತ್ಯ ಸಾವಿರಾರು ಮಂದಿ ಸಾರ್ವಜನಿಕರು ಕಛೇರಿಗೆ ಬರುತ್ತಾರೆ. ಆದ್ದರಿಂದ ಇನ್ನುಮುಂದೆ ಶೌಚಾಲಯವನ್ನು ಶುಚಿಗೊಸುತ್ತಿರಬೇಕು ಎಂದು ಸೂಚನೆ ನೀಡಿದರು.



**ಸಾರ್ವಜನಿಕ ಸಂಪರ್ಕಾಧಿಕಾರಿ**